# Bangalore
# Regional News
# 04.02.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಸಣ್ಣ ಹಣಕಾಸು ಸಂಸ್ಥೆಗಳ ಮಸೂದೆಯಲ್ಲಿ ಶಿಕ್ಷೆಯ ಅವಧಿ ೩ ವರ್ಷದಿಂದ ೧೦ ವರ್ಷಕ್ಕೆ ಏರಿಕೆ - ಗೃಹ ಸಚಿವ ಡಾ. ಜಿ. ಪರಮೇಶ್ವರ್
2. ರಾಜ್ಯದ ಸಾಲ ೬ ಲಕ್ಷ ೬೫ ಸಾವಿರ ಕೋಟಿ ರೂಪಾಯಿಗೆ ಏರಿಕೆ ; ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ ಅಸಮಧಾನ
3. ೧೫ನೇ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ; ನಾಳೆಯಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೆಲ ವಿಮಾನಗಳ ಹಾರಾಟಕ್ಕೆ ನಿರ್ಬಂಧ
4. ಇಂದು ವಿಶ್ವ ಕ್ಯಾನ್ಸರ್ ದಿನ ; ದೇಶಾದ್ಯಂತ ಜಾಗೃತಿ ಕಾರ್ಯಕ್ರಮ
5. ೩೮ನೇ ರಾಷ್ಟ್ರೀಯ ಕ್ರೀಡಾಕೂಟ - ಅಗ್ರಸ್ಥಾನ ಕಾಯ್ದುಕೊಂಡ ಕರ್ನಾಟಕ

<><><><>

ಬಲವಂತವಾಗಿ ಸಾಲ ವಸೂಲಿ ಮಾಡುವ ಸಣ್ಣ ಹಣಕಾಸು ಕಂಪನಿಯ ಸಿಬ್ಬಂದಿ ವಿರುದ್ಧ ೩ ವರ್ಷ ಇದ್ದ ಶಿಕ್ಷೆಯ ಅವಧಿಯನ್ನು ೧೦ ವರ್ಷಕ್ಕೆ ಏರಿಸಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ದಂಡದ ಪ್ರಮಾಣವನ್ನು ೫ ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದು ಸಷ್ಟಪಡಿಸಿದ್ದಾರೆ. ಕಿರುಕುಳ ಕೊಡುವವರಿಗೆ ಕಾನೂನಿನ ಬಿಸಿ ತಟ್ಟಬೇಕು ಎಂದು ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ರಾಜ್ಯಪಾಲರಿಗೆ ಈಗಾಗಲೇ ಮಸೂದೆ ಕಳುಹಿಸಲಾಗಿದೆ. ಅವರು ಸಹಿ ಮಾಡಿದ ಕೂಡಲೇ ಸುಗ್ರೀವಾಜ್ಞೆ ಜಾರಿ ಆಗಲಿದೆ ಎಂದು ಗೃಹ ಸಚಿವರು ಸ್ಪಷ್ಟಪಡಿಸಿದ್ದಾರೆ. ಸಣ್ಣ ಹಣಕಾಸು ಸಂಸ್ಥೆಗಳು ನ್ಯಾಯಾಲಯಕ್ಕೆ ಹೋಗಬಹುದು ಎಂಬ ದೃಷ್ಟಿಯಿಂದ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮ ತೆಗೆದುಕೊಂಡು, ಎಲ್ಲವನ್ನು ಗಮನದಲ್ಲಿಟ್ಟುಕೊಂಡು ಕರಡು ಸಿದ್ಧ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಡಾ. ಜಿ. ಪರಮೇಶ್ವರ್

<><><><>

ಕರ್ನಾಟಕವನ್ನು ದಿವಾಳಿ ಮಾಡುವುದು ರಾಜ್ಯ ಕಾಂಗ್ರೆಸ್ ಸರ್ಕಾರದ ಒಂದು ಸಾಲಿನ ಕಾರ್ಯಸೂಚಿಯಾಗಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಒಟ್ಟು ಸಾಲವನ್ನು ೬ ಲಕ್ಷ ೬೫ ಸಾವಿರ ಕೋಟಿಗೆ ತಲುಪಿಸಿದ್ದಾರೆ. ಪ್ರತಿ ಕನ್ನಡಿಗನ ಮೇಲೆ ಬರೋಬ್ಬರಿ ೧ ಲಕ್ಷ ರೂಪಾಯಿ ಸಾಲದ ಹೊರೆಯನ್ನು ಕಾಂಗ್ರೆಸ್ ಸರ್ಕಾರ ಹೊರಿಸಿದೆ ಎಂದು ದೂರಿದ್ದಾರೆ. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕರ್ನಾಟಕ ನಾವೀನ್ಯತೆಯ ಸೂಚ್ಯಂಕದಲ್ಲಿ, ಬಂಡವಾಳ ಹೂಡಿಕೆಯಲ್ಲಿ ಅಗ್ರಸ್ಥಾನದಲ್ಲಿತ್ತು. ಆದರೆ ಸದ್ಯದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕರ್ನಾಟಕ ಅತಿ ಹೆಚ್ಚು ಸಾಲ ಮಾಡುವ ರಾಜ್ಯಗಳಲ್ಲಿ ಒಂದನೇ ಸ್ಥಾನದಲ್ಲಿದೆ ಎಂದು ಹೇಳಿದ್ದಾರೆ. ರಾಜಕೀಯ ಲಾಭಕ್ಕಾಗಿ ಅನ್ನದಾತರ ಹಿತಾಸಕ್ತಿಯನ್ನು ಬಲಿಕೊಟ್ಟಿರುವ ಕಾಂಗ್ರೆಸ್ ಪಕ್ಷದ ಅಸಲಿ ಬಣ್ಣ ಈಗ ಬಯಲಾಗಿದೆ ಎಂದು ಆರ್. ಅಶೋಕ ತಿಳಿಸಿದ್ದಾರೆ.

<><><>

ಯಲಹಂಕದಲ್ಲಿ ನಡೆಯುವ ಏರೋ ಇಂಡಿಯಾ ವೈಮಾನಿಕ ಪ್ರದರ್ಶನದ ಕಾರಣ ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಿಮಾನಗಳ ಸಂಚಾರದಲ್ಲಿ ವ್ಯತ್ಯಯವಾಗಲಿದೆ. ನಾಳೆಯಿಂದ ಆರಂಭಗೊಂಡು ಕೆಲವು ತಾಸು ವಿಮಾನ ನಿಲ್ದಾಣದಲ್ಲಿ ಟೇಕಾಫ್, ಲ್ಯಾಂಡಿಂಗ್ ಸ್ಥಗಿತಗೊಳ್ಳಲಿದೆ. ಈ ಬಗ್ಗೆ ಬೆಂಗಳೂರು ವಿಮಾನ ನಿಲ್ದಾಣ ಆಡಳಿತ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿದೆ. ಏರ್ ಶೋ ಕಾರ್ಯಕ್ರಮದ ಸುರಕ್ಷತೆಯ ದೃಷ್ಟಿಯಿಂದ ಈ ಕ್ರಮ ಕೈಗೊಳ್ಳಲಾಗಿದೆ. ವಿಮಾನ ಪ್ರಯಾಣಿಕರು ಟೇಕಾಫ್, ಲ್ಯಾಂಡಿಂಗ್ ಸ್ಥಗಿತಗೊಳ್ಳಲಿರುವ ಸಮಯವನ್ನು ಗಮನಿಸಿಕೊಂಡು ಪ್ರಯಾಣದ ಯೋಜನೆ ರೂಪಿಸುವಂತೆ ಬೆಂಗಳೂರು ವಿಮಾನ ನಿಲ್ದಾಣ ಆಡಳಿತ ಸಲಹೆ ನೀಡಿದೆ. ಇದೇ ೧೦ ರಿಂದ ೧೪ ರವರೆಗೆ ಏರೋ ಇಂಡಿಯಾ ಏರ್ ಶೋ ನಡೆಯಲಿದ್ದು, ಇದು ಏಷ್ಯಾದ ಅತಿದೊಡ್ಡ ವೈಮಾನಿಕ ಪ್ರದರ್ಶನಗಳಲ್ಲಿ ಒಂದಾಗಿದೆ. ಮಿಲಿಟರಿ ಮತ್ತು ನಾಗರಿಕ ವಿಮಾನಯಾನ ತಜ್ಞರು, ಉದ್ಯಮ ವಲಯದ ಪ್ರಮುಖರು ಮತ್ತು ತಂತ್ರಜ್ಞಾನ ಉತ್ಸಾಹಿಗಳು ಇದರಲ್ಲಿ ಭಾಗವಹಿಸಲಿದ್ದಾರೆ.

<><><>

ಇಂದು ವಿಶ್ವ ಕ್ಯಾನ್ಸರ್ ದಿನ. ದೇಶಾದ್ಯಂತ ಜನರಲ್ಲಿ ಈ ಪಿಡುಗಿನ ಬಗ್ಗೆ ಜಾಗೃತಿ ಮೂಡಿಸುವ ವಿವಿಧ ಕಾರ್ಯಕ್ರಮಗಳು ನಡೆಯುತ್ತಿವೆ. ಇತ್ತೀಚಿನ ವರ್ಷಗಳಲ್ಲಿ ಕ್ಯಾನ್ಸರ್ ಕಾಯಿಲೆ ಹೆಚ್ಚಾಗುತ್ತಿದ್ದು, ಕ್ಯಾನ್ಸರ್ ರೋಗದ ಬಗ್ಗೆ ಜನರಲ್ಲಿ ಸರಿಯಾಗಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಈ ದಿನವನ್ನು ಆಚರಿಸಲಾಗುತ್ತದೆ. ೨೦೦೦ದ ಫೆಬ್ರವರಿ ೪ರಂದು ಪ್ಯಾರಿಸ್‌ನಲ್ಲಿ ನಡೆದ ವಿಶ್ವ ಶೃಂಗಸಭೆಯಲ್ಲಿ ಈ ದಿನ ಆಚರಣೆಗೆ ತೀರ್ಮಾನಿಸಲಾಯಿತು. ದಾವಣಗೆರೆಯಲ್ಲಿಂದು ಕ್ಯಾನ್ಸರ್ ಬಗ್ಗೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಖಾಸಗಿ ಆಸ್ಪತ್ರೆಗಳು ಇಂದು ಕಾಲ್ನಡಿಗೆ ಜಾಗೃತಿ ಜಾಥಾ ಏರ್ಪಡಿಸಿದ್ದವು. ಜಾಥಾ ಉದ್ದೇಶಿಸಿ ಮಾತನಾಡಿದ ಕ್ಯಾನ್ಸರ್‌ನಿಂದ ಗುಣಮುಖರಾಗಿರುವ ಕಲಾವಿದ ಆರ್.ಟಿ.ಅರುಣ್ ಕುಮಾರ್ ತಾನು ಕ್ಯಾನ್ಸರ್ ಗೆದ್ದು ೧೫ ವರ್ಷಗಳಾಗಿವೆ. "ಅನನ್ಯತೆಯಿಂದ ಒಂದುಗೂಡುವಿಕೆ" ಇದು ಈ ವರ್ಷದ ಘೋಷ ವಾಕ್ಯವಾಗಿದ್ದು, ನಾವು ನಿಮ್ಮೊಂದಿಗೆ ಇದ್ದೇವೆ. ಕ್ಯಾನ್ಸರ್ ಬಗ್ಗೆ ಭಯ ಬೇಡ ಎಂದು ಭರವಸೆ ನೀಡಿದ್ದಾರೆ.

<><><><>

೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ, ಕರ್ನಾಟಕದ ೧೫ ವರ್ಷದ ಜೊನಾಥನ್ ಗವಿನ್ ಆಂಟೋನಿ ನಿನ್ನೆ ಪುರುಷರ ೧೦ ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ. ಈ ಮೂಲಕ ಪ್ರಸ್ತುತ, ಕರ್ನಾಟಕ ೨೨ ಚಿನ್ನ ೧೦ ಬೆಳ್ಳಿ ಹಾಗೂ ೧೯ ಕಂಚಿನ ಪದಕಗಳೊಂದಿಗೆ ಅಗ್ರ ಸ್ಥಾನದಲ್ಲಿದೆ. ಸರ್ವಿಸಸ್ ೧೯ ಚಿನ್ನ, ೧೦ ಬೆಳ್ಳಿ ಮತ್ತು ೯ ಕಂಚಿನೊಂದಿಗೆ ೨ನೇ ಸ್ಥಾನದಲ್ಲಿದೆ. ಮೂರನೇ ಸ್ಥಾನದಲ್ಲಿರುವ ಮಹಾರಾಷ್ಟ್ರ ೧೫ ಚಿನ್ನ, ೨೬ ಬೆಳ್ಳಿ ಮತ್ತು ೨೧ ಕಂಚಿನ ಪದಕಗಳನ್ನು ಗಳಿಸಿದೆ.

<><><><>

ಏಳನೇ ಆವೃತ್ತಿಯ ಇಂಡಸ್ ಇಂಡ್ ಬ್ಯಾಂಕ್, ನಾಗೇಶ್ ಟ್ರೋಫಿ ರಾಷ್ಟ್ರೀಯ ಟಿ೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಕರ್ನಾಟಕ ಅಂದರ ತಂಡ ಜಾರ್ಖಂಡ್ ತಂಡವನ್ನು ಮಣಿಸಿ  ಸೆಮಿ ಫೈನಲ್ ಪ್ರವೇಶಿಸಿದೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಜಾರ್ಖಂಡ್ ತಂಡ ತನ್ನ ನಿಗದಿತ ೨೦ ಓವರ್ ಗಳಲ್ಲಿ ಐದು ವಿಕೆಟ್ ಕಳೆದುಕೊಂಡು ೧೬೩ ರನ್ ಗಳಿಸಿತು. ೧೬೪ ರನ್‌ಗಳನ್ನು ಬೆನ್ನತ್ತಿದ ಕರ್ನಾಟಕ ಕೇವಲ ೧೨.೩ ಎಸೆತದಲ್ಲಿ ಗೆಲುವು ಸಾಧಿಸಿತ್ತು.

ಕರ್ನಾಟಕ ಒಂದು ಲೀಗ್ ಮ್ಯಾಚ್ ನ ಇನ್ನೊಂದು ಪಂದ್ಯವನ್ನು ನಾಳೆ ಒಡಿಸ್ಸಾ ವಿರುದ್ಧ ಆಡಲಿದೆ.

<><><><>

ಹಾವೇರಿ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಕುಷ್ಠರೋಗದ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ ಕುಷ್ಠರೋಗಿಗಳ ಪತ್ತೆಗಾಗಿ ಇದೇ ೧೩ ರವರೆಗೆ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಈವರೆಗೆ ೭೮ ಕುಷ್ಠರೋಗಿಗಳು ಪತ್ತೆಯಾಗಿದ್ದಾರೆಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ. ಚನ್ನಬಸಯ್ಯ ವಿರಕ್ತಮಠ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ. ಜಿಲ್ಲೆಯಲ್ಲಿ ೨೭೨ ತಂಡಗಳ ಮೂಲಕ ಸಮೀಕ್ಷೆ ನಡೆಸಲಾಗಿದ್ದು, ಪರಿಣಾಮಕಾರಿಯಾಗಿ ಕುಷ್ಠರೋಗ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ : ಡಾಕ್ಟರ್ ಚನ್ನಬಸಯ್ಯ ವಿರಕ್ತಮಠ

<><><><>

ಸಂಚಾರ ನಿಯಮಗಳನ್ನು ಪಾಲಿಸುವ ಮೂಲಕ ಸಾರ್ವಜನಿಕರು ವಾಹನ ಚಲಾಯಿಸಬೇಕು ಎಂದು ಯಾದಗಿರಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಮಿಲಿಂದಕುಮಾರ್ ತಿಳಿಸಿದ್ದಾರೆ. ೩೮ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ಆಯೋಜಿಸಿದ್ದ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಜೀವಕ್ಕಿಂತ ಅಮೂಲ್ಯವಾದದ್ದು ಮತ್ತೊಂದಿಲ್ಲ. ಅಪಘಾತ ತಡೆಯಲು ಹೆಲ್ಮೆಟ್ ಕಡ್ಡಾಯವಾಗಿ ಧರಿಸಬೇಕು. ಮದ್ಯಪಾನ ಮಾಡಿ ವಾಹನ ಚಲಾಯಿಸಬಾರದು ಎಂದು ಅರಿವು ಮೂಡಿಸಿದ್ದಾರೆ.

<><><><>

ಕೋಲಾರ ಜಿಲ್ಲೆಯಲ್ಲಿ ಒತ್ತುವರಿಯಾಗಿರುವ ಕೆರೆಗಳನ್ನು ಆದ್ಯತೆ ಮೇರೆಗೆ ತೆರವುಗಳಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಕೆರೆಗಳ ಒತ್ತುವರಿ ತೆರವು ಪ್ರಗತಿ ಪರಿಶೀಲನೆ ನಡೆಸಿದ ಅವರು, ರಾಷ್ಟ್ರೀಯ ಹಸಿರು ಪ್ರಾಧಿಕಾರದ ಆದೇಶದಂತೆ ಜಿಲ್ಲಾ ಮಟ್ಟದಲ್ಲಿ ಸಮಿತಿ ರಚಿಸಲಾಗಿದೆ. ಎಲ್ಲಾ ಕೆರೆಗಳ ಸರ್ವೇ ಕಾರ್ಯವನ್ನು ಹಂತ ಹಂತವಾಗಿ ಪೂರ್ಣಗೊಳಿಸಲು ಎಲ್ಲಾ ತಹಶೀಲ್ದಾರ್‌ಗಳು ಕ್ರಮ ವಹಿಸಬೇಕು. ಪ್ರತಿ ತಿಂಗಳು ಗುರಿ ನಿಗದಿಪಡಿಸಿ ಕೆರೆಗಳ ಒತ್ತುವರಿ ತೆರವುಗೊಳಿಸಿ ವರದಿ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ. ಮತ್ತೆ ಕೆರೆಗಳ ಒತ್ತುವರಿಯಾದರೆ ಆಯಾ ಅಧಿಕಾರಿಯನ್ನು ಹೊಣೆಗಾರರನ್ನಾಗಿಸಿ ಮೊಕದ್ದಮೆ ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯಲ್ಲಿ ಒಟ್ಟು ೨ ಸಾವಿರದ ೫೨೦ ಕೆರೆಗಳಿದ್ದು, ಒತ್ತುವರಿ ಸಂಬಂಧ ಹೈಕೋರ್ಟ್‌ನಲ್ಲಿ ಪ್ರಕರಣ ಬಾಕಿ ಇವೆ. ಜಿಲ್ಲಾ ವ್ಯಾಪ್ತಿಯಲ್ಲಿ ಕೆರೆಗಳ ತೆರವು ಮಾಡಿರುವ ಕುರಿತು ನ್ಯಾಯಾಲಯಕ್ಕೆ ಮಾಹಿತಿ ನೀಡಬೇಕಿದ್ದು, ತೆರವು ಕಾರ್ಯಾಚರಣೆ ತ್ವರಿತವಾಗಿ ನಡೆಯಬೇಕು ಎಂದು ಸೂಚನೆ ನೀಡಿದ್ದಾರೆ.

<><><><>

ಕಾರವಾರದ ರವೀಂದ್ರನಾಥ್ ಟಾಗೋರ್ ಕಡಲ ತೀರದ ಮಯೂರ ವರ್ಮ ವೇದಿಕೆಯಲ್ಲಿ ಏಪ್ರಿಲ್ ೧೮ ರಿಂದ ೨೨ ವರೆಗೆ ೫ ದಿನಗಳವರೆಗೆ ಕರಾವಳಿ ಉತ್ಸವ ೨೦೨೫ ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್ ವೈದ್ಯ ತಿಳಿಸಿದ್ದಾರೆ. ಕರಾವಳಿ ಉತ್ಸವ ಕುರಿತಂತೆ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಾರ್ಯಕ್ರಮಕ್ಕೆ ಬೇಕಾದ ಎಲ್ಲಾ ಅಗತ್ಯ ಸಿದ್ದತೆಗಳನ್ನು ಈಗಿನಿಂದಲೇ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><><>

<u>ಸಂಕ್ಷಿಪ್ತ ಸುದ್ದಿಗಳು</u>

1. ರಾಜ್ಯದ ನಗರ, ಪಟ್ಟಣ ಪ್ರದೇಶಗಳ ಮಾದರಿಯಲ್ಲಿ ಗ್ರಾಮೀಣ ಪ್ರದೇಶಗಳಲ್ಲೂ ಸ್ವಚ್ಛತೆಗಾಗಿ ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳುವ ಸಂಬಂಧ ವಿಧಾನಸಭಾ ಅಧಿವೇಶನದಲ್ಲಿ ಚರ್ಚೆ ನಡೆಸಿದ್ದು, ಈ ಕುರಿತು ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ದಾವಣಗೆರೆಯಲ್ಲಿಂದು ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>